ಕರ್ನಾಟಕ ಸರ್ಕಾರ

ಸಂಖ್ಯೆ: ಕಾಇ 170 ಸ್ವೀಮರ 2018 (ಭಾಗ-5)

ಕರ್ನಾಟಕ ಸರ್ಕಾರದ ಸಚಿವಾಲಯ
ವಿಕಾಸಸೌಧ
ಬೆಂಗಳೂರು ದಿನಾಂಕ: 08-04-2020

## ಸುತ್ತೋಲೆ

ವಿಷಯ: ಕೊರೋನ ವೈರಸ್ ಹರಡುತ್ತಿರುವ ಹಿನ್ನಲೆಯಲ್ಲಿ ಮುಂಜಾಗ್ರತಾ ಕ್ರಮಗಳನ್ನು ಕೈಗೊಳ್ಳುವ ಬಗ್ಗೆ.

ಉಲ್ಲೇಖ: ಸರ್ಕಾರದ ಸಮಸಂಖ್ಯೆಯ ಸುತ್ತೋಲೆ ದಿನಾಂಕ: 18.03.2020 ಹಾಗೂ 21.03.2020

*****

ಕಾರ್ಮಿಕ ಇಲಾಖೆ ಮತ್ತು ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆಯ ಸಹಯೋಗದೊಂದಿಗೆ ಕೊರೋನಾ ವಿರುದ್ಧ ಹೋರಡಲು Corona Warriors Volunteer ಗ್ರೂಪ್ ಅನ್ನು ರಚಿಸಲಾಗಿರುತ್ತದೆ. ಸದರಿ ಸ್ವಯಂ ಸೇವಕರಿಗೆ ಮಾಸ್ಕ್, ಸ್ಯಾನಿಟೈಸರ್, ಜಾಕೇಟ್, ಬ್ಯಾಗ್ (ಕಿಟ್) ನೀಡಲು ಅವಕಾಶವಿರುತ್ತದೆ. ಈ ನಿಟ್ಟಿನಲ್ಲಿ ಕಾರ್ಮಿಕ ಇಲಾಖೆ ಮತ್ತು ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆಯು ಕೆಳಕಂಡ ಕ್ರಮಗಳನ್ನು ವಹಿಸಬೇಕು.

1) ಪ್ರತಿ ಜಿಲ್ಲೆಯಲ್ಲಿ ಕೊರೋನ ವಾರಿಯರ್ಸ್ ಸ್ವಯಂ ಸೇವಕರಿಗೆ ಅಗತ್ಯವಿರುವ ವಸ್ತುಗಳನ್ನು ನೀಡುವ ಹೊಣೆಗಾರಿಕೆಯನ್ನು ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ ವಹಿಸುವುದು ಹಾಗೂ ಎಷ್ಟು ಜನ ಸ್ವಯಂ ಸೇವಕರಿಗೆ ಈ ವಸ್ತುಗಳನ್ನು ನೀಡಬೇಕೆಂಬುದರ ಪಟ್ಟಿಯನ್ನು ಸಲ್ಲಿಸುವುದು.
2) ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆಯು ಈ ಸ್ವಯಂ ಸೇವಕರಿಗೆ ಗುರುತಿನ ಚೀಟಿಯನ್ನು ಸ್ಥಳೀಯವಾಗಿ ಮುದ್ರಿಸಿ ನೀಡಬೇಕು.
3) ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆಯು ಕಾರ್ಮಿಕ ಇಲಾಖೆಯ ಅಧಿಕಾರಿಗಳ ಸಹಯೋಗ ಪಡೆದು ಈ ಅಗತ್ಯ 4 ವಸ್ತುಗಳನ್ನು ಸ್ವಯಂಸೇವಕರಿಗೆ ವಿತರಿಸುವುದು. ಅಗತ್ಯವಿದ್ದಲ್ಲಿ ಜಿಲ್ಲಾಧಿಕಾರಿಗಳೊಂದಿಗೆ ಸಂಪರ್ಕ ಸಾಧಿಸಿ ಈ ಕಾರ್ಯವನ್ನು ನಿರ್ವಹಿಸುವುದು.
4) ಕಾರ್ಮಿಕ ಅಧಿಕಾರಿಗಳು ಇದಕ್ಕೆ ತಗಲುವ ವೆಚ್ಚವನ್ನು ಭರಿಸುವುದು

(ಸಂಧ್ಯಾ ಎಲ್.ನಾಯಕ್)
ಸರ್ಕಾರದ ಉಪ ಕಾರ್ಯದರ್ಶಿ
ಕಾರ್ಮಿಕ ಇಲಾಖೆ

ಪ್ರತಿಯನ್ನು:

1) ಕಾರ್ಮಿಕ ಆಯುಕ್ತರು, ಕಾರ್ಮಿಕ ಭವನ, ಡೈರಿ ವೃತ್ತ, ಬೆಂಗಳೂರು
2) ಕಾರ್ಯದರ್ಶಿ, ಕರ್ನಾಟಕ ಕಟ್ಟಡ ಮತ್ತು ಇತರೆ ನಿರ್ಮಾಣ ಕಾರ್ಮಿಕರ ಕಲ್ಯಾಣ ಮಂಡಳಿ, ಬೆಂಗಳೂರು
3) ಆಯುಕ್ತರು, ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ, ಬೆಂಗಳೂರು.
4) ಜಂಟಿ ಕಾರ್ಮಿಕ ಆಯುಕ್ತರು, ಕರ್ನಾಟಕ ರಾಜ್ಯ ಅಸಂಘಟಿತ ಕಾರ್ಮಿಕರ ಸಾಮಾಜಿಕ ಭದ್ರತಾ ಮಂಡಳಿ, ಬೆಂಗಳೂರು
5) ಎಲ್ಲಾ ಜಿಲ್ಲೆಗಳ ಕಾರ್ಮಿಕ ಅಧಿಕಾರಿಗಳು. (ಕಾರ್ಮಿಕ ಆಯುಕ್ತಾಲಯದ ಮೂಲಕ)
6) ಎಲ್ಲಾ ಜಿಲ್ಲೆಯ ವಾರ್ತಾಮತ್ತು ಸಾರ್ವಜನಿಕ ಸಂಪರ್ಕ ಅಧಿಕಾರಿಗಳು (ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಆಯುಕ್ತಾಲಯದ ಮೂಲಕ)
7) ಮಾನ್ಯ ಇಲಾಖಾ ಸಚಿವರ ಆಪ್ತ ಕಾರ್ಯದರ್ಶಿ, ವಿಧಾನಸೌಧ, ಬೆಂಗಳೂರು.
8) ಸರ್ಕಾರದ ಕಾರ್ಯದರ್ಶಿಯವರ ಆಪ್ತ ಕಾರ್ಯದರ್ಶಿ, ಬೆಂಗಳೂರು.